# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1. | ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 94 |
| 2. | ಮಾನ್ಯ ಸದಸ್ಯರ ಹೆಸರು | ಶ್ರೀ ಎಂ.ಎಲ್.ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3. | ಉತ್ತರಿಸಬೇಕಾದ ದಿನಾಂಕ | 04.12.2023 |
| 4. | ಉತ್ತರಿಸುವ ಸಚಿವರು | ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

*****

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೇಂದ್ರ ಸರ್ಕಾರವು ಪ್ರತಿ ಜಿಲ್ಲೆಯಲ್ಲಿ ವೈದ್ಯಕೀಯ ಕಾಲೇಜು ತೆರೆಯುವುದಾಗಿ ಘೋಷಣೆ ಮಾಡಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ಸಂಪೂರ್ಣ ಮಾಹಿತಿ ನೀಡುವುದು) | ಕೇಂದ್ರದ ನೀತಿ ಆಯೋಗದನ್ವಯ ಸರ್ಕಾರಿ ವೈದ್ಯಕೀಯ ಕಾಲೇಜುಗಳಿರದ ಜಿಲ್ಲೆಗಳಲ್ಲಿ ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ (ಪಿಪಿಪಿ) ಹೊಸ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭ ಮಾಡುವ ಬಗ್ಗೆ ಅವಕಾಶ ಕಲ್ಪಿಸಿದ್ದು, ಕೇಂದ್ರ ಸರ್ಕಾರದಿಂದಲೇ ವೈದ್ಯಕೀಯ ಕಾಲೇಜು ತೆರೆಯುವ ಬಗ್ಗೆ ಘೋಷಣೆ ಮಾಡಿರುವುದಿಲ್ಲ. |
| ಆ) | ರಾಜ್ಯದಲ್ಲಿ ಇಲ್ಲಿಯವರೆಗೂ ಕೇಂದ್ರ ಸರ್ಕಾರದಿಂದ ಹಾಗೂ ರಾಜ್ಯ ಸರ್ಕಾರದಿಂದ ಅನುಮೋದನೆಗೊಂಡು ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ವೈದ್ಯಕೀಯ ಕಾಲೇಜುಗಳ ಸಂಖ್ಯೆ ಎಷ್ಟು; ಮತ್ತು ಅವು ಯಾವುವು; (ಯಾವ ವರ್ಷದಲ್ಲಿ ಪ್ರಾರಂಭವಾದವು ಎಂಬ ಬಗ್ಗೆ ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು) | ರಾಜ್ಯದಲ್ಲಿ ಇಲ್ಲಿಯವರೆಗೂ ಕೇಂದ್ರ ಸರ್ಕಾರದಿಂದ ಹಾಗೂ ರಾಜ್ಯ ಸರ್ಕಾರದಿಂದ ಅನುಮೋದನೆಗೊಂಡು 24 ಸರ್ಕಾರಿ ವೈದ್ಯಕೀಯ ಕಾಲೇಜುಗಳು ಕಾರ್ಯನಿರ್ವಹಿಸುತ್ತಿರುತ್ತವೆ. ಸಂಪೂರ್ಣ ಮಾಹಿತಿಯನ್ನು ಅನುಬಂಧದಲ್ಲಿ ಒದಗಿಸಿದೆ. |
| ಇ) | ಕೋಲಾರ ಜಿಲ್ಲೆಯಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಪ್ರಾರಂಭಿಸಲಾಗುವುದು; (ಸಂಪೂರ್ಣ ಮಾಹಿತಿ ನೀಡುವುದು) | ಪ್ರಸ್ತುತದಲ್ಲಿ ಕೋಲಾರ ಜಿಲ್ಲೆಯಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. ಅನುದಾನದ ಲಭ್ಯತೆಯನ್ನು ಆಧರಿಸಿ ಸರ್ಕಾರಿ ವೈದ್ಯಕೀಯ ಕಾಲೇಜುಗಳಿರದ ಜಿಲ್ಲೆಗಳಲ್ಲಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲು ಕ್ರಮವಹಿಸಲಾಗುವುದು. |

| | | |
|---|---|---|
| ಈ) | ರಾಜ್ಯ ಸರ್ಕಾರ ಸರ್ಕಾರದಿಂದ ವೈದ್ಯಕೀಯ ಕಾಲೇಜುಗಳಿಗೆ ಪ್ರತಿ ವರ್ಷ ಬಿಡುಗಡೆಯಾಗುವ ಅನುದಾನವೆಷ್ಟು; ಸದರಿ ಅನುದಾನವನ್ನು ಯಾವ ಉದ್ದೇಶಕ್ಕಾಗಿ ಬಳಸಬಹುದಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು) | 2022-23ನೇ ಸಾಲಿಗೆ ವೈದ್ಯಕೀಯ ಕಾಲೇಜುಗಳಿಗೆ ಒಟ್ಟು ರೂ.268323.36 ಲಕ್ಷಗಳ ಅನುದಾನ ಬಿಡುಗಡೆ ಮಾಡಲಾಗಿದೆ. ರೆವಿನ್ಯೂ ಲೆಕ್ಕ ಶೀರ್ಷಿಕೆ ಅಡಿಯ ಸಹಾಯಾನುದಾನವನ್ನು ವೇತನ, ಪಿಂಚಣಿ, ಶಿಷ್ಯವೇತನ, ವೇತನೇತರ ವೆಚ್ಚಗಳಿಗೆ ಅನುದಾನವನ್ನು ಬಳಸಲಾಗುತ್ತಿದೆ ಹಾಗೂ ಬಂಡವಾಳ ಲೆಕ್ಕ ಶೀರ್ಷಿಕೆ ಅನುದಾನವನ್ನು ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಹಾಗೂ ಕಾಲೇಜುಗಳನ್ನು ಮೇಲ್ದರ್ಜೆಗೇರಿಸಲು ಅನುದಾನವನ್ನು ಬಳಸಲಾಗುತ್ತಿದೆ. |
| ಉ) | ವೈದ್ಯಕೀಯ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ರಾಜ್ಯ ಸರ್ಕಾರ ಸರ್ಕಾರದಿಂದ ಯಾವ ಯಾವ ಸೌಲಭ್ಯಗಳು ದೊರೆಯುತ್ತಿವೆ; ವಿದ್ಯಾರ್ಥಿಗಳ ವಿದ್ಯಾಭ್ಯಾಸದ ಅನುಕೂಲಕ್ಕಾಗಿ ಯಾವುದಾದರು ಹೊಸ ಯೋಜನೆಯನ್ನು ಸರ್ಕಾರ ರೂಪಿಸಲು ಚಿಂತಿಸಿದೆಯೇ? (ಸಂಪೂರ್ಣ ಮಾಹಿತಿ ನೀಡುವುದು) | ವೈದ್ಯಕೀಯ ಕಾಲೇಜುಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಎಲ್ಲಾ ವಿದ್ಯಾರ್ಥಿಗಳ ವಿದ್ಯಾಭ್ಯಾಸದ ಅನುಕೂಲಕ್ಕಾಗಿ Digital Library ಮತ್ತು Audio Visual Aids ಸೌಲಭ್ಯಗಳನ್ನು ನೀಡಲಾಗಿದೆ. ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ Scholarship ಅನ್ನು ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ Laptop, BP Apparatus, Stethoscope, Study lamp, EBL charges Medical and reference books ಗಳ ಸೌಲಭ್ಯಗಳನ್ನು ಒದಗಿಸಲಾಗಿದೆ. |

**ಸಂಖ್ಯೆ:ಎಂಇಡಿ 675 ಎಂಎಂಸಿ 2023**

**(ಡಾ|| ಶರಣಪ್ರಕಾಶ ಆರ್. ಪಾಟೀಲ)**
ವೈದ್ಯಕೀಯ ಶಿಕ್ಷಣ ಹಾಗೂ
ಕೌಶಲ್ಯಾಭಿವೃದ್ಧಿ,ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು

## ಅನುಬಂಧ-1

| ಕ್ರ. ಸಂ | ಕಾಲೇಜು / ಸಂಸ್ಥೆಯ ಹೆಸರು | ಪ್ರಾರಂಭವಾದ ವರ್ಷ |
|---|---|---|
| 1. | ಬೆಂಗಳೂರು ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಸಂಶೋಧನಾ ಸಂಸ್ಥೆ, ಬೆಂಗಳೂರು. | 1955 |
| 2. | ಮೈಸೂರು ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಸಂಶೋಧನಾ ಸಂಸ್ಥೆ ಮೈಸೂರು | 1924 |
| 3. | ಕರ್ನಾಟಕ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹುಬ್ಬಳ್ಳಿ | 1957 |
| 4. | ವಿಜಯನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬಳ್ಳಾರಿ | 1962 |
| 5. | ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೀದರ್ | 2007 |
| 6. | ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ರಾಯಚೂರು | 2007-08 |
| 7. | ಬೆಳಗಾವಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೆಳಗಾಂ | 2005 |
| 8. | ಶಿವಮೊಗ್ಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಶಿವಮೊಗ್ಗ | 2007 |
| 9. | ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾಸನ | 2005-06 |
| 10. | ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಂಡ್ಯ | 2006 |
| 11. | ಚಾಮರಾಜನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಚಾಮರಾಜನಗರ | 2014-15 |
| 12. | ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಡಿಕೇರಿ, ಕೊಡಗು | 2014 |
| 13. | ಗುಲ್ಬರ್ಗಾ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಗುಲ್ಬರ್ಗಾ | 2013-14 |
| 14. | ಕೊಪ್ಪಳ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಕೊಪ್ಪಳ | 2015 |
| 15. | ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಗದಗ | 2014-15 |
| 16. | ಕಾರವಾರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಕಾರವಾರ. | 2016 |
| 17. | ಶ್ರೀ ಅಟಲ್ ಬಿಹಾರಿ ವಾಜಪೇಯಿ ಮಹಾವಿದ್ಯಾಲಯ ಹಾಗೂ ಸಂಶೋಧನಾ ಸಂಸ್ಥೆ, ಬೆಂಗಳೂರು. | 2019-20 |
| 18. | ಚಿಕ್ಕಬಳ್ಳಾಪುರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಚಿಕ್ಕಬಳ್ಳಾಪುರ. | 2021-22 |
| 19. | ಹಾವೇರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾವೇರಿ. | 2022-23 |
| 20. | ಯಾದಗಿರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಯಾದಗಿರಿ. | 2022-23 |
| 21. | ಚಿಕ್ಕಮಗಳೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಚಿಕ್ಕಮಗಳೂರು | 2022-23 |
| 22. | ಚಿತ್ರದುರ್ಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಚಿತ್ರದುರ್ಗ | 2023-24 |
| 23. | ESIC ಬೆಂಗಳೂರು | 2012 |
| 24. | ESIC ಕಲಬುರಗಿ | 2013 |